# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಜಿಡ್ಡಿ ಬಾಗಲು ಎಸ್.ಎಸ್., ಹಿಂದಿನ ಕಾರ್ಯದರ್ಶಿ, ಚಿಕ್ಕರೂಗಿ ಗ್ರಾಮ ಪಂಚಾಯತಿ, ಸಿಂಧಗಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಕುರಿತು.

**ಓದಲಾಗಿದೆ:**

1) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ. Compt/UPLOK/BGM/1078/2014/PP, ದಿನಾಂಕ:29.12.2016
2) ಸರ್ಕಾರದ ಸಮಸಂಖ್ಯೆಯ ಪತ್ರ, ದಿನಾಂಕ 21.01.2017

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿನ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 26.12.2016 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ಭೀಮಗೊಂಡ ಸಂಗಪ್ಪ ಕಬಾಡಗಿ ರವರು (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು, ವಿಜಯಪುರ ಜಿಲ್ಲೆಯ ಸಿಂಧಗಿ ತಾಲ್ಲೂಕಿನ ಚಿಕ್ಕರೂಗಿ ಗ್ರಾಮ ಪಂಚಾಯತಿಯಿಂದ 2007 ರಿಂದ 2010 ರವರೆಗೆ ನಡೆದ ಕಾಮಗಾರಿಗಳಲ್ಲಿ ಕಡ್ಲೆವಾಡದ ಕೆ.ಇ.ಬಿ.ಯಿಂದ ಅಂಕಲವರೆಗಿನ ರಸ್ತೆ ಹಾಗೂ ಚಿಕ್ರೂಗಿ ಗ್ರಾಮದಲ್ಲಿ ನಿರ್ಮಿಸಲಾಗಿರುವ ಸಿಮೆಂಟ್ ಕಾಂಕ್ರೀಟ್ ರಸ್ತೆಗಳು ಕಳಪೆ ಕಾಮಗಾರಿಯಿಂದ ಹಾಳಾಗಿದ್ದು, ರಸ್ತೆಗಳಲ್ಲಿ ಹಳ್ಳಕೊಳ್ಳಗಳು ಬಿದ್ದಿರುತ್ತವೆ ಹಾಗೂ ವಸತಿ ಯೋಜನೆಯಡಿಯಲ್ಲಿ ಅನರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಿ ಮನೆಗಳನ್ನು ಮಂಜೂರು ಮಾಡಲಾಗಿದ್ದು, ಎದುರುದಾರರ ವಿರುದ್ಧ ಕ್ರಮ ಜರುಗಿಸಲು ಕೋರಿರುತ್ತಾರೆ. ಈ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 9 ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದು, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1)(ii) ಮತ್ತು (iii) ರನ್ವಯ ಎದುರುದಾರರು ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುತ್ತಾರೆಂದು ಕಂಡು ಬರುವುದರಿಂದ, ಎದುರುದಾರರಾದ ಶ್ರೀ ಜಿಡ್ಡಿ ಬಾಗಲು ಎಸ್.ಎಸ್., ಹಿಂದಿನ ಕಾರ್ಯದರ್ಶಿ, ಚಿಕ್ಕರೂಗಿ ಗ್ರಾಮ ಪಂಚಾಯತಿ, ಸಿಂಧಗಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14–ಎ ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಹಾಗೂ ಮತ್ತೊಬ್ಬ ಎದುರುದಾರರಾದ ಶ್ರೀಮತಿ ರೇಣುಕಾ ಗೋಪಾಲ್ ಜಡಿಪೇಟ, ಹಿಂದಿನ ಅಧ್ಯಕ್ಷರು, ಚಿಕ್ಕರೂಗಿ ಗ್ರಾಮ ಪಂಚಾಯತಿ, ಸಿಂಧಗಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರನ್ವಯ ಕ್ರಮ ಜರುಗಿಸಲು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ, ಲೋಕಾಯುಕ್ತ ವರದಿಯ ಶಿಫಾರಸ್ಸಿನಂತೆ, ಶ್ರೀಮತಿ ರೇಣುಕಾ ಗೋಪಾಲ್ ಜಡಿಪೇಟ, ಹಿಂದಿನ ಅಧ್ಯಕ್ಷರು, ಚಿಕ್ಕರೂಗಿ ಗ್ರಾಮ ಪಂಚಾಯತಿ, ಸಿಂಧಗಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರನ್ವಯ ಕ್ರಮ ಜರುಗಿಸಲು ಸಕ್ಷಮ ಅಧಿಕಾರಿಯಾದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ವಿಜಯಪುರ ಜಿಲ್ಲಾ ಪಂಚಾಯತಿ, ವಿಜಯಪುರ ಇವರಿಗೆ ಮೇಲೆ ಓದಲಾದ (2) ರಲ್ಲಿ ನಿರ್ದೇಶನ ನೀಡಲಾಗಿದೆ.

ಹಾಗೂ ಎದುರುದಾರರಾದ ಶ್ರೀ ಜಿಡ್ಡಿ ಬಾಗಲು ಎಸ್.ಎಸ್., ಹಿಂದಿನ ಕಾರ್ಯದರ್ಶಿ, ಚಿಕ್ಕರೂಗಿ ಗ್ರಾಮ ಪಂಚಾಯತಿ, ಸಿಂಧಗಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14–ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 10 ಗ್ರಾಪಂಕಾ 2017, ಬೆಂಗಳೂರು, ದಿನಾಂಕ: 21.01.2017**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಜಿಡ್ಡಿ ಬಾಗಲು ಎಸ್.ಎಸ್., ಹಿಂದಿನ ಕಾರ್ಯದರ್ಶಿ, ಚಿಕ್ಕರೂಗಿ ಗ್ರಾಮ ಪಂಚಾಯತಿ, ಸಿಂಧಗಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳ ನಿಯಮ 14–ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ-8 ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ.ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತ ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
   (ಮೇಲೆ ಓದಲಾದ (1) ರಲ್ಲಿ ಸಲ್ಲಿಸಲಾದ ಮೂಲ ದಾಖಲಾತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲಾಗಿದೆ)
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ವಿಜಯಪುರ ಜಿಲ್ಲಾ ಪಂಚಾಯತಿ, ವಿಜಯಪುರ.
5) ಕಾರ್ಯನಿರ್ವಾಹಕ ಅಧಿಕಾರಿ, ಸಿಂಧಗಿ ತಾಲ್ಲೂಕು ಪಂಚಾಯತಿ, ಸಿಂಧಗಿ, ವಿಜಯಪುರ ಜಿಲ್ಲೆ.
   (ಸಂಬಂಧಿಸಿದ ನೌಕರರಿಗೆ ಆದೇಶದ ಪ್ರತಿಯನ್ನು ತಲುಪಿಸಿ ಸರ್ಕಾರಕ್ಕೆ ಸ್ವೀಕೃತಿ ನೀಡುವಂತೆ ಕೋರಿದೆ.)
6) ಶ್ರೀ ಜಿಡ್ಡಿ ಬಾಗಲು ಎಸ್.ಎಸ್., ಹಿಂದಿನ ಕಾರ್ಯದರ್ಶಿ, ಚಿಕ್ಕರೂಗಿ ಗ್ರಾಮ ಪಂಚಾಯತಿ, ಸಿಂಧಗಿ ತಾಲ್ಲೂಕು, ವಿಜಯಪುರ ಜಿಲ್ಲೆ.
7) ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.